ಸಂಪುಟ : 9 ಸಂಚಿಕೆ 285 ಪುಟ : 4+2 ಬೆಲೆ: 3.00 ಬುಧವಾರ ಡಿಸೆಂಬರ್ 25 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 285 Pages : 4+2 Price : 3.00 Wednesday December 25 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕೇಂದ್ರ ಗೃಹ ಸಚಿವ ಅಮಿತ್ ಶಾ ವಿರುದ್ಧ ಕ್ರಮಕ್ಕೆ ಒತ್ತಾಯ । ವಿವಿಧ ದಲಿತಪರ ಸಂಘಟನೆಗಳಿಂದ ಅವಳಿ ನಗರದಲ್ಲಿ ಪ್ರತಿಭಟನೆ, ಭಾವಚಿತ್ರ ದಹನ

## ಡಾ. ಬಿ.ಆರ್. ಅಂಬೇಡ್ಕರ್ ವಿರೋಧಿ ಹೇಳಿಕೆಗೆ ಶಾಸಕ ಜಿ.ಎಸ್. ಪಾಟೀಲ ಕಿಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಂದ್ರ ಗೃಹ ಸಚಿವ ಅಮಿತ್ ಶಾ ಡಾ. ಅಂಬೇಡ್ಕರ್ ಅವರ ಬಗ್ಗೆ ಬಹಳ ಹಗುರವಾಗಿ ಮಾತನಾಡಿದ್ದಾರೆ. ಮುಂದಿನ ದಿನಗಳಲ್ಲಿ ರಾಷ್ಟ್ರದಲ್ಲಿ ಸಂವಿಧಾನಕ್ಕೆ ಧಕ್ಕೆ ಬರುವಂತಹ ಮಾತುಗಳನ್ನಾಡಿದ್ದಾರೆ. ಈ ಕಾರಣಕ್ಕಾಗಿ, ಎಲ್ಲ ದಲಿತ, ಪ್ರಗತಿಪರ ಒಕ್ಕೂಟಗಳು ಒಕ್ಕೊರಲಿನಿಂದ ಗದಗ ಬಂದ್ ಮಾಡಿದ್ದೇವೆ. ಗದಗ-ಬೆಟಗೇರಿ ಅವಳಿ ನಗರ ಬಂದ್ ಯಶಸ್ವಿಯಾಗಿದ್ದು, ನಗರದ ಎಲ್ಲ ವ್ಯಾಪಾರಸ್ಥರು ಸಹಕಾರ ನೀಡಿದ್ದಾರೆ. ಅವರೆಲ್ಲರಿಗೂ ಹೃತ್ಪೂರ್ವಕ ಧನ್ಯವಾದಗಳು ಎಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ ಹೇಳಿದರು.

ಡಾ. ಬಿ.ಆರ್. ಅಂಬೇಡ್ಕರ್ ವಿರೋಧಿ ಹೇಳಿಕೆ ನೀಡಿದ ಗೃಹ ಸಚಿವ ಅಮಿತ್ ಶಾ ಅವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸಬೇಕು, ಶಾ ಅವರು ಅಂಬೇಡ್ಕರ್ ಪ್ರತಿಮೆ ಎದುರಿಗೆ ಮಂಡಿಯೂರಿ ಕುಳಿತು ದೇಶದ ಜನರ ಕ್ಷಮೆ ಕೇಳಬೇಕು ಎಂದು ಆಗ್ರಹಿಸಿ ದಲಿತ ಸಂರಕ್ಷಣಾ ಸಮಿತಿ ಒಕ್ಕೂಟ ಮಂಗಳವಾರ ಕರೆ ನೀಡಿದ್ದ ಗದಗ ಬಂದ್‌ನಲ್ಲಿ ಪಾಲ್ಗೊಂಡು, ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಅವರು ಮಾತನಾಡುತ್ತಿದ್ದರು.

75 ವರ್ಷದ ಪೂರ್ವದಲ್ಲಿ ಬ್ರಿಟಿಷ್‌ರ ಕಾಲದಲ್ಲಿ ನರಕಯಾತನೆ ಅನುಭವಿಸಿದ್ದೇವೆ. ಸ್ವಾತಂತ್ರ್ಯ ಸಿಕ್ಕ ಬಳಿಕ, ಪೂರಕ ಸಂವಿಧಾನ ರಚನೆಯಾದ ಬಳಿಕ ನಾವು ಈಗ ಸ್ವರ್ಗದಲ್ಲಿದ್ದೇವೆ ಎಂಬುದನ್ನು ಅಮಿತ್ ಶಾ ಮರೆತಿದ್ದಾರೆ. ಅವರಿಗೆ ಅದರ ಅಗತ್ಯವಿದ್ದಂತಿಲ್ಲ. ಮತ್ತೆ ನಮ್ಮನ್ನು ನರಕಕ್ಕೆ ತರಬೇಕು ಅಂತಿದ್ದಾರೆ. ಬಿಜೆಪಿ ನಾಯಕರು ಇಷ್ಟು ದಿನ ಸಾರ್ವಜನಿಕ ಸಭೆಗಳಲ್ಲಿ ಇಂತಹ ಕುಚ್ಯೋದದ ಹೇಳಿಕೆ ನೀಡುತ್ತಿದ್ದರು. ಆದರೆ ಈಗ ಸಂಸತ್ ಭವನದಲ್ಲಿಯೇ ಹೇಳುತ್ತಿದ್ದಾರೆ ಎಂದು ಶಾಸಕ ಜಿ.ಎಸ್. ಪಾಟೀಲ ಆಕ್ರೋಶ ವ್ಯಕ್ತಪಡಿಸಿದರು.

ಇದೊಂದು ಸಂಚಿನಂತಿದೆ. ಇದು ದೇಶದ ಇತಿಹಾಸದಲ್ಲಿ ಅತ್ಯಂತ ಕೆಟ್ಟ ಪರಿಸ್ಥಿತಿ. ಇಂತಹ ಮನಸ್ಥಿತಿಯಿಂದ ದೇಶದ ಭವಿಷ್ಯಕ್ಕೆ ಒಳ್ಳೆಯದಾಗದು. ಇದಕ್ಕೆ ಈಗಲೇ ಕಡಿವಾಣ ಹಾಕದಿದ್ದರೆ ದೇಶದ ಜನ ಯಾರೂ ಸುಮ್ಮನಿರುವುದಿಲ್ಲ ಎಂದು ಎಚ್ಚರಿಕೆ ನೀಡಿದರಲ್ಲದೆ, ಈ ಹೋರಾಟ ತಾಲೂಕು, ಗ್ರಾಮ ಪಂಚಾಯಿತಿ ಮಟ್ಟದಲ್ಲಿಯೂ ನಡೆಯಲಿದೆ ಎಂದರು.

ಸಂಸದರೊಬ್ಬರು ಸಂವಿಧಾನ ಬದಲಾವಣೆ ಮಾಡುತ್ತೇವೆ, ಸಂವಿಧಾನವನ್ನು ಸುಟ್ಟುಹಾಕುತ್ತೇವೆ ಎನ್ನುತ್ತಿದ್ದರೂ ಬಿಜೆಪಿ ನಾಯಕರು ಅವರಿಗೆ ನಿರ್ಬಂಧ ಹಾಕಲಿಲ್ಲ. ದೇವರೇ ಅವರಿಗೆ ನಿರ್ಬಂಧ ಹಾಕಿದ್ದಾನೆ ಎಂದು ಪರೋಕ್ಷವಾಗಿ ಮಾಜಿ ಸಂಸದ ಅನಂತಕುಮಾರ ಹೆಗಡೆ ವಿರುದ್ಧ ಶಾಸಕ ಜಿ.ಎಸ್. ಪಾಟೀಲ ವಾಗ್ದಾಳಿ ನಡೆಸಿದರು.

# ಅವಳಿ ನಗರ ಬಂದ್ ಸಂಪೂರ್ಣ ಯಶಸ್ವಿ



■ವಿಜಯಸಾಕ್ಷಿ ಸುದ್ದಿ, ಗದಗ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ವಿರೋಧಿ ಹೇಳಿಕೆ ನೀಡಿದ ಗೃಹ ಸಚಿವ ಅಮಿತ್ ಶಾ ಅವರನ್ನು ತಕ್ಷಣವೇ ಸಂಪುಟದಿಂದ ವಜಾಗೊಳಿಸುವಂತೆ ದಲಿತ ಸಂರಕ್ಷಣಾ ಸಮಿತಿ ಒಕ್ಕೂಟ ಕರೆ ನೀಡಿದ್ದ ಗದಗ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಯಿತು.

ಬೆಳಗ್ಗೆ 6 ಗಂಟೆಯಿಂದಲೇ ಆರಂಭಗೊಂಡ ಪ್ರತಿಭಟನೆಯಲ್ಲಿ ನಗರದ ಮುಳಗುಂದ ನಾಕಾ ಬಳಿ. ಪ್ರತಿಭಟನಕಾರರು ಅಮಿತ್ ಶಾ ಭಾವಚಿತ್ರಕ್ಕೆ ಬೆಂಕಿ ಹಚ್ಚಿ ಆಕ್ರೋಶ ಹೊರಹಾಕಿದರು. ಬಳಿಕ ನಗರದ ವಿವಿಧೆಡೆ ಬೈಕ್ ರ‍್ಯಾಲಿ ನಡೆಸಿ, ಕೊನೆಗೆ ಗಾಂಧಿ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ನಂತರ ಜಿಲ್ಲಾಧಿಕಾರಿಗಳಿಗೆ ಮನವಿ ನೀಡಿದರು.

ಬೆಟಗೇರಿ ಬಸ್ ನಿಲ್ದಾಣ, ಗದಗ ಹೊಸ ಮತ್ತು ಹಳೆ ಬಸ್ ನಿಲ್ದಾಣ, ಮುಳಗುಂದ ನಾಕಾ, ಹಾತಲಗೇರಿ ನಾಕಾ, ಟಿಪ್ಪು ವೃತ್ತ ಸೇರಿ ನಗರದ ಪ್ರಮುಖ ವೃತ್ತ ಹಾಗೂ ಪ್ರದೇಶಗಳಲ್ಲಿ ದಲಿತ ಮುಖಂಡರು ಅಂಬೇಡ್ಕರ್ ಅವರ ಭಾವಚಿತ್ರದೊಂದಿಗೆ ಬಂದ್ ಆಚರಿಸಿದರು.

ದೇಶದಲ್ಲಿ 25 ಕೋಟಿಗೂ ಹೆಚ್ಚು ಇರುವ ಪರಿಶಿಷ್ಟ ಜಾತಿ, ಪಂಗಡದ ಜನರಿಗೆ ಡಾ. ಬಿ.ಆರ್. ಅಂಬೇಡ್ಕರ್ ಸಾಕ್ಷಾತ್ ದೇವರಾಗಿದ್ದಾರೆ. ಅಂಬೇಡ್ಕರ್ ಅವರನ್ನು ಅವಮಾನಿಸುವುದನ್ನು ಸಹಿಸುವುದಿಲ್ಲ. ಅಮಿತ್ ಶಾ ದೇಶದ ಜನರೆದುರು ಕ್ಷಮೆ ಕೇಳಬೇಕು. ಇಲ್ಲವಾದಲ್ಲಿ ಪ್ರತಿಭಟನೆಯ ಕಿಚ್ಚು ದೇಶವ್ಯಾಪಿ ವಿಸ್ತರಿಸಲಿದೆ ಎಂದು ಪ್ರತಿಭಟನಾಕಾರರು ಎಚ್ಚರಿಕೆ ನೀಡಿದರು.

ಗದಗ ಬಂದ್ ಹಿನ್ನೆಲೆಯಲ್ಲಿ ಶಾಲಾ-ಕಾಲೇಜುಗಳು, ಚಿತ್ರಮಂದಿರಗಳು, ಪ್ರಮುಖ ಬೀದಿಗಳಲ್ಲಿರುವ ಅಂಗಡಿ ಮುಂಗಟ್ಟುಗಳು, ಹೋಟೆಲ್‌ಗಳು ಮುಚ್ಚಿದ್ದವು. ಗದಗ ಬಂದ್ ಘೋಷಣೆಯ ಹಿನ್ನೆಲೆಯಲ್ಲಿ ಬಹುತೇಕ ಗ್ರಾಮಾಂತರ ಪ್ರದೇಶದ ಜನರು ನಗರಕ್ಕೆ ಆಗಮಿಸಿರಲಿಲ್ಲ. ಆದರೆ ಅನಿವಾರ್ಯ ಕಾರಣಗಳಿಂದ ನಗರಕ್ಕೆ ಆಗಮಿಸಿದ ಜನರು ಬಸ್ ಸೌಕರ್ಯವಿಲ್ಲದೆ ಸಮಸ್ಯೆ ಎದುರಿಸಿದರು. ಸಾರಿಗೆ ಬಸ್‌ಗಳ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿತ್ತು.

### ಜಿಲ್ಲಾಧಿಕಾರಿಗಳಿಗೆ ಮನವಿ

ಅವಳಿ ನಗರದಲ್ಲಿ ವ್ಯಾಪಾರ-ವಹಿವಾಟು, ಅಂಗಡಿ, ಮುಂಗಟ್ಟು, ವಾಹನ ಸಂಚಾರ ಎಲ್ಲವೂ ಸ್ತಬ್ಧವಾಗಿತ್ತು. ನಗರದ ಪ್ರಮುಖ ವೃತ್ತಗಳಲ್ಲಿ ಅಮಿತ್ ಶಾ ವಿರುದ್ಧ ಪ್ರತಿಭಟನೆ ನಡೆಸಿದರಲ್ಲದೆ, ಮುಳಗುಂದ ನಾಕಾ, ಮಹಾತ್ಮ ಗಾಂಧಿ ಸರ್ಕಲ್, ಹಳೆಯ ಡಿಸಿ ಆಫೀಸ್ ವೃತ್ತ, ಭೂಮರಡ್ಡಿ ವೃತ್ತ, ಹುಯಿಲಗೋಳ ನಾರಾಯಣರಾವ್ ವೃತ್ತ, ಬೆಟಗೇರಿ ಬಸ್ ನಿಲ್ದಾಣ ವೃತ್ತ ಸೇರಿದಂತೆ ಅನೇಕ ಕಡೆಗಳಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು. ನಂತರ, ನಗರದ ಗಾಂಧಿ ವೃತ್ತದಲ್ಲಿ ಜಿಲ್ಲಾಧಿಕಾರಿಗಳಿಗೆ ಪ್ರತಿಭಟನಾಕಾರರು ಮನವಿ ಸಲ್ಲಿಸಿದರು.

### ಹಲವು ಸಂಘಟನೆಗಳ ಬೆಂಬಲ

ದಲಿತ ಸಂರಕ್ಷಣಾ ಸಮಿತಿ, ಅಲ್ಪಸಂಖ್ಯಾತ ಸಂಘಟನೆಗಳ ಒಕ್ಕೂಟ, ರೈತ ಸಂಘಟನೆಗಳು, ಕಟ್ಟಡ ಕಾರ್ಮಿಕ ಸಂಘಟನೆಗಳು, ಬಸವದಳ, ಆಟೋ ಚಾಲಕರು-ಮಾಲೀಕರ ಸಂಘ, ಜೈಭೀಮ್ ಸೇನೆ, ಕರ್ನಾಟಕ ರಕ್ಷಣಾ ವೇದಿಕೆ, ಭೀಮ್ ಆರ್ಮಿ, ಬೀದಿಬದಿ ವ್ಯಾಪಾರಸ್ಥರ ಸಂಘ, ಜಿಲ್ಲಾ ಸ್ಲಂ ಸಮಿತಿ, ಕನ್ನಡಪರ ಸಂಘಟನೆಗಳು ಸೇರಿದಂತೆ ವಿವಿಧ ಸಂಘ-ಸಂಸ್ಥೆಗಳ ಮುಖಂಡರು ಅಂಬೇಡ್ಕರ್ ಅವರ ಭಾವಚಿತ್ರ ಹಿಡಿದು ಪ್ರತಿಭಟನೆ ನಡೆಸಿದರು.

### ಪೊಲೀಸ್ ಬಂದೋಬಸ್ತ್



ಪ್ರತಿಭಟನೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಬಿಗಿ ಭದ್ರತೆ ಕಲ್ಪಿಸಲಾಗಿತ್ತು. ಇಬ್ಬರು ಎಸ್‌ಪಿ, 3 ಜನ ಡಿವೈಎಸ್ಪಿ, 10 ಸಿಪಿಐ, 30 ಜನ ಪಿ.ಎಸ್.ಐ, 500 ಜನ ಪೊಲೀಸ್ ಸಿಬ್ಬಂದಿಗಳು, ಎರಡು ಕೆ.ಎಸ್.ಆರ್.ಪಿ ತುಕಡಿ, ಹೋಮ್ ಗಾರ್ಡ್ ಒಳಗೊಂಡಂತೆ ಸಾವಿರಾರು ಸಿಬ್ಬಂದಿಗಳನ್ನು ನಿಯೋಜಿಸಲಾಗಿತ್ತು.

## ನಾಳೆ ವಿದ್ಯುತ್ ನಿಲುಗಡೆ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ 110/11ಕೆವ್ಹಿ ವಿದ್ಯುತ್ ವಿತರಣಾ ಉಪ-ಕೇಂದ್ರದ ತ್ರೈಮಾಸಿಕ ನಿರ್ವಹಣೆಯ ನಿಮಿತ್ತ ಡಿ. 26ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 5.30ರವರೆಗೆ ವಿದ್ಯುತ್ ನಿಲುಗಡೆಯಾಗಲಿದೆ.

ವಿತರಣಾ ಕೇಂದ್ರದ ವ್ಯಾಪ್ತಿಯ ನರೇಗಲ್ಲ, ಕೋಡಿಕೊಪ್ಪ, ತೋಟಗಂಟಿ, ಮಲ್ಲಾಪುರ, ಬೂದಿಹಾಳ, ಕೊಚಲಾಪುರ, ದ್ಯಾಂಪುರ, ಹಾಳಕೇರಿ, ನಿಡಗುಂದಿ, ನಿಡಗುಂದಿಕೊಪ್ಪ, ಕಳಕಾಪುರ, ಮಾರನಬಸರಿ, ಜಕ್ಕಲಿ, ಕೋಟುಮಚಗಿ, ನಾರಾಯಣಪುರ, ಅಬ್ಬಿಗೇರಿ, ಯರೆಬೆಲೇರಿ, ನಾಗರಾಳ, ಕುರಡಗಿ, ಡ.ಸ. ಹಡಗಲಿ, ಗುಜಮಾಗಡಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

### ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ನೂತನ ಕಟ್ಟಡ ಉದ್ಘಾಟಿಸಿದ ಗೃಹ ಸಚಿವ ಡಾ. ಜಿ.ಪರಮೇಶ್ವರ


# ಎರಡು ವರ್ಷಗಳಲ್ಲಿ ಅವಳಿ ನಗರ ಡ್ರಗ್ಸ್ ಮುಕ್ತ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಯುವ ಜನರು ಡ್ರಗ್ಸ್‌ನ್ನು ಯಥೇಚ್ಛವಾಗಿ ಬಳಸುತ್ತಿದ್ದಾರೆ. ಹುಬ್ಬಳ್ಳಿ-ಧಾರವಾಡ ಅವಳಿ ನಗರಗಳಲ್ಲಿ ಡ್ರಗ್ಸ್ ಬಳಕೆ ಸ್ವಲ್ಪಮಟ್ಟಿಗೆ ಕಡಿಮೆಯಾಗಿದೆ. ಮುಂದಿನ ಎರಡು ವರ್ಷಗಳಲ್ಲಿ ಅವಳಿ ನಗರಗಳು ಡ್ರಗ್ಸ್ ಮುಕ್ತವಾಗಲಿವೆ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.

ಮಂಗಳವಾರ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಹಾಗೂ ಹುಬ್ಬಳ್ಳಿ-ಧಾರವಾಡ ಪೊಲೀಸ್ ಆಯುಕ್ತಾಲಯದ ವತಿಯಿಂದ ಹುಬ್ಬಳ್ಳಿ ಗ್ರಾಮೀಣ ಪೊಲೀಸ್ ಠಾಣೆಯ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈಗಾಗಲೇ ಕೆಲವು ಜಿಲ್ಲೆಗಳಲ್ಲಿ ಪೊಲೀಸರು ಆಯಾ ಜಿಲ್ಲೆಗಳನ್ನು ಡ್ರಗ್ಸ್ ಮುಕ್ತ ಮಾಡುತ್ತೇವೆ ಎಂದಿದ್ದಾರೆ. ಅದೇ



ರೀತಿಯಲ್ಲಿ ಹುಬ್ಬಳ್ಳಿ-ಧಾರವಾಡ ನಗರಗಳನ್ನು ಡ್ರಗ್ಸ್ ಮುಕ್ತ ಮಾಡುವಲ್ಲಿ ಪೊಲೀಸ್ ಆಯುಕ್ತರು ಮುಂದಾಗಬೇಕು. ಬೆಂಗಳೂರಿನಲ್ಲಿ ನೈಜೀರಿಯಾ ಮಹಿಳೆಯಿಂದ ರೂ.25 ಕೋಟಿ ಮೌಲ್ಯದ 14 ಕೆ.ಜಿ. ಡ್ರಗ್ಸ್ ವಶಪಡಿಸಿಕೊಳ್ಳಲಾಗಿದೆ

ಕರ್ನಾಟಕ ಕೊಳಚೆ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಅಬ್ಬಯ್ಯ ಪ್ರಸಾದ ಮಾತನಾಡಿ, ಕಾನೂನು ಸುವ್ಯವಸ್ಥೆ ಕಾಪಾಡುವ ಅಧಿಕಾರ ಪೊಲೀಸರಿಗೆ ಇದೆ. ಸರ್ಕಾರಿದಿಂದ ಪೊಲೀಸರಿಗೆ ಸಾಕಷ್ಟು ಸೌಲಭ್ಯಗಳನ್ನು ನೀಡಲಾಗುತ್ತಿದೆ. ಪೊಲೀಸರು ದಿನದ 24 ಗಂಟೆಗಳ ಕಾಲ ಸೇವೆ ಸಲ್ಲಿಸುತ್ತಾರೆ.

1.10 ಲಕ್ಷ ಪೊಲೀಸ್ ಸಿಬ್ಬಂದಿಗಳಿದ್ದಾರೆ. 2 ಸಾವಿರ ಕೋಟಿ ಅನುದಾನದಲ್ಲಿ 10 ಸಾವಿರ ಮನೆ ನಿರ್ಮಾಣ ಮಾಡುವ ಗುರಿ ಹೊಂದಲಾಗಿದೆ ಎಂದರು.

ಎಂದು ಅವರು ತಿಳಿಸಿದರು.

▸▸3ನೇ ಪುಟಕ್ಕೆ

### ಸ್ವಾತಂತ್ರ್ಯ ಯೋಧರ ಮನೆಗಳಿಗೆ ತೆರಳಿ ಆಹ್ವಾನ ನೀಡಿದ ಸಚಿವ ಎಚ್.ಕೆ. ಪಾಟೀಲ

# ಗಾಂಧೀಜಿ ಪುತ್ಥಳಿ ಅನಾವರಣ ಡಿ. 27ಕ್ಕೆ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ

ಬೆಳಗಾವಿಯಲ್ಲಿ ನಡೆಯುತ್ತಿರುವ 39ನೇ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಸಂಭ್ರಮಾಚರಣೆ ದಿನದಿಂದ ದಿನಕ್ಕೆ ಮೆರಗು ಪಡೆಯುತ್ತಿದೆ. ಶತಮಾನೋತ್ಸವದ ಸಮಿತಿಯ ಅಧ್ಯಕ್ಷ ಹಾಗೂ ರಾಜ್ಯದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಖಾತೆ ಸಚಿವ ಎಚ್.ಕೆ. ಪಾಟೀಲರು ಮಂಗಳವಾರ ಸಾಂಕೇತಿಕವಾಗಿ ಸ್ವಾತಂತ್ರ್ಯ ಯೋಧರ ಮನೆಗಳಿಗೆ ತೆರಳಿ ಸುವರ್ಣ ಸೌಧದ ಮುಂದೆ ಪ್ರತಿಷ್ಠಾಪಿಸಲಾಗಿರುವ ಮಹಾತ್ಮ ಗಾಂಧೀ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ಕುಟುಂಬ ಸಮೇತ ಆಗಮಿಸಲು ಆಹ್ವಾನ ನೀಡಿದರು.

ಬೆಳಿಗ್ಗೆ ರಾಮತೀರ್ಥನಗರದಲ್ಲಿ ಇರುವ ಅಣ್ಣು ಗುರೂಜಿ ಅವರ ಮನೆಗೆ, ಹನುಮಾನ ನಗರದಲ್ಲಿರುವ ವಿಠ್ಠಲರಾವ್ ಯಾಳಗಿ ಹಾಗೂ 1924ರ ಬೆಳಗಾವಿ ಕಾಂಗ್ರೆಸ್ ಅಧಿವೇಶನದ ರೂವಾರಿ ಶ್ರೀಗಂಗಾಧರರಾವ್ ದೇಶಪಾಂಡೆ ಅವರ ಮನೆಗಳಿಗೆ ಖುದ್ದಾಗಿ ಭೇಟಿ ನೀಡಿ ಆಹ್ವಾನ ನೀಡಿದರು.



ಸ್ವಾತಂತ್ರ್ಯ ಹೋರಾಟಗಾರರ ಮನೆಗಳಿಗೆ ನೀಡಿದ ಭೇಟಿ ಬಗ್ಗೆ ಸಚಿವರು ಸಂತಸ ವ್ಯಕ್ತಪಡಿಸಿ, ಈ ಕುಟುಂಬದ ಸದಸ್ಯರ ಜೊತೆ ಕೆಲ ಕ್ಷಣಗಳನ್ನು ಕಳೆದಿರುವುದು ಸಂತೋಷದ, ಹೆಮ್ಮೆಯ ಭಾವ ಮೂಡಿಸಿತು ಎಂದು ತಮ್ಮನ್ನು ಬೇಟಿಯಾದ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದರು.

ಈ ಕುಟುಂಬದ ಸದಸ್ಯರಿಂದ ಸಚಿವ ಎಚ್.ಕೆ. ಪಾಟೀಲ ಅವರು ವಿವರವಾದ ಮಾಹಿತಿ ಪಡೆದುಕೊಂಡರು. ಅಸ್ಪೃಶತೆ ನಿವಾರಣೆಗೆ ಗಾಂಧೀಜಿ ಕರೆಕೊಟ್ಟ ಕಾಲಘಟ್ಟದಲ್ಲಿ ಬೆಳಗಾವಿ ಅಧಿವೇಶನ ನಡೆಯುತ್ತಿತ್ತು. ನಮ್ಮ ಮನೆತನದವರು ಸ್ವಯಂ ಪ್ರೇರಿತರಾಗಿ ಭಂಗಿ ಬಳಿಯಲು ಮುಂದಾದರು. ಹೀಗಾಗಿ ಅವರು ಮುಂಚೂಣಿಯಲ್ಲಿ ಇರಲ್ಲಿಲ್ಲ. ಇದನ್ನು ಈಗ ಊಹಿಸಿಕೊಳ್ಳವದೂ ಕಷ್ಟ ಎಂದು ಅಣ್ಣೂ ಗುರೂಜೀ ಅವರ ಮೊಮ್ಮಗ ಮಹೇಶ ದೇಶಪಾಂಡೆ ಹೇಳಿದರು.

ನಮ್ಮೂರು ಹಾಗೂ ಸುತ್ತಮುತ್ತಲಿನ ಊರುಗಳ ಜನರು ಗಾಂಧೀಜೀಯಿಂದ ಪ್ರೇರಿತರಾಗಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಧುಮುಕಿದರು ಎಂದು ನಮ್ಮಜ್ಜ ಹೇಳುತ್ತಿದ್ದರು. ನಾವೆಲ್ಲ ಅಜ್ಜನ ನೆರಳಿನಿಂದಲೇ ಬೆಳೆದವರು. ನಮ್ಮಜ್ಜ ತಲಾಠಿ ನೌಕರಿ ಬಿಟ್ಟು ಸ್ವಾತಂತ್ರ್ಯ ಚಳುವಳಿಗೆ ಧುಮುಕಿದರು. ನಾನು ಈ ಎಲ್ಲ ಮಾಹಿತಿ, ದಾಖಲೆ ಸಂಗ್ರಹಿಸಿರುವೆ ಎಂದರು.

ಇದು ಪುಸ್ತಕ ರೂಪದಲ್ಲಿ ಬರಬೇಕೆಂದು ಸಚಿವರು ದೇಶಪಾಂಡೆ ಅವರಿಗೆ ಸಲಹೆ ಮಾಡಿ, ಬೆಳಗಾವಿ ಅಧಿವೇಶನ ಕುರಿತು ಅಣ್ಣು ಗುರೂಜಿ ಬರೆದ ಕಿರು ಪುಸ್ತಕ ಮರು ಮುದ್ರಿಸಲು ಆದೇಶ ನೀಡಿದರು.

▸▸3ನೇ ಪುಟಕ್ಕೆ

### ಗಂಗಾ ಕಲ್ಯಾಣ ಯೋಜನೆಯಡಿ ಫಲಾನುಭವಿಗಳಿಗೆ ಪಂಪ್‌ಸೆಟ್, ಪೈಪ್‌ಗಳ ವಿತರಣೆ

# ಯೋಜನೆಗಳೊಂದಿಗೆ ಆರ್ಥಿಕ ಸ್ವಾವಲಂಬಿಗಳಾಗಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಎಸ್‌ಸಿ/ಎಸ್‌ಟಿ ಸಮುದಾಯದ ಏಳಿಗೆಗಾಗಿ ಹಲವಾರು ಯೋಜನೆಗಳು ಜಾರಿಯಲ್ಲಿದ್ದು, ಇವೆಲ್ಲವುಗಳನ್ನು ಅರ್ಹ ಫಲಾನುಭವಿಗಳು ಸದುಪಯೋಗಪಡಿಸಿಕೊಂಡು ಆರ್ಥಿಕ ಸ್ವಾವಲಂಬಿಗಳಾಗಬೇಕೆಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಮಂಗಳವಾರ ಶಿರಹಟ್ಟಿ ಪಟ್ಟಣದ ಎಫ್.ಎಂ. ಡಬಾಲಿ ಕಾಲೇಜು ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ ಅಭಿವೃದ್ಧಿ ನಿಗಮ, ಆದಿ ಜಾಂಬವ ಅಭಿವೃದ್ಧಿ ನಿಗಮ, ಭೋವಿ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ 19 ಫಲಾನುಭವಿಗಳಿಗೆ ಪಂಪ್‌ಸೆಟ್ ಹಾಗೂ ಪೈಪ್‌ಗಳನ್ನು ವಿತರಿಸಿ ಮಾತನಾಡಿದರು.

ಈ ಯೋಜನೆಯಡಿ ಈಗಾಗಲೇ ಫಲಾನುಭವಿಗಳ ಜಮೀನುಗಳಲ್ಲಿ



ಬೋರ್‌ವೆಲ್ ಕೊರೆಯಿಸಲಾಗಿದ್ದು, ಇದಕ್ಕೆ ಅಳವಡಿಸಬೇಕಾದ ಪಂಪ್‌ಸೆಟ್ ಮತ್ತು ಪೈಪುಗಳನ್ನು ಸಮರ್ಪಕವಾಗಿ ಜೋಡಣೆ ಮಾಡಿಕೊಳ್ಳಬೇಕು. ಈ ಹಿಂದೆ ನಿಗಮದ ಅಧಿಕಾರಿಗಳೊಂದಿಗೆ ಕ್ಷೇತ್ರದಲ್ಲಿಯ ಅರ್ಹ ಫಲಾನುಭವಿಗಳಿಗೆ ಪಂಪ್‌ಸೆಟ್ ಮತ್ತು ಪೈಪುಗಳನ್ನು ವಿತರಿಸುವಂತೆ ಮನವಿ ಮಾಡಿಕೊಳ್ಳಲಾಗಿತ್ತು. ಅದರಂತೆ ಹಂತ ಹಂತವಾಗಿ ಫಲಾನುಭವಿಗಳಿಗೆ ಪರಿಕರಗಳನ್ನು ವಿತರಿಸಲಾಗುತ್ತಿದೆ. ಇದನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಬೇಕು. ಇಲ್ಲದೇ ಹೋದಲ್ಲಿ ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಲಾಗುವುದು ಎಂದರು.

ತಾ.ಪಂ ಮಾಜಿ ಅಧ್ಯಕ್ಷ ಜಾನು ಲಮಾಣಿ, ಪ.ಪಂ ಸದಸ್ಯರಾದ ಫಕ್ಕೀರೇಶ ರಟ್ಟಿಹಳ್ಳಿ, ಸಂದೀಪ ಕಪ್ಪತ್ತನವರ, ಅಶೋಕ ವರವಿ, ಪರಶುರಾಮ ಡೊಂಕಬಳ್ಳಿ, ಗೂಳಪ್ಪ ಕರಿಗಾರ, ಎಚ್. ಎಂ. ದೇವಗಿರಿ, ಸಿ.ಪಿ. ಕಾಳಗಿ, ಅಕ್ಬರಸಾಬ ಯಾದಗಿರಿ, ಶರಣು ಹೊಸೂರ, ಮಲ್ಲಿಕಾರ್ಜುನ ಕಬಾಡಿ, ನಿಗಮದ ಅಧಿಕಾರಿ ಉದಯಕುಮಾರ ಮುಂತಾದವರು

# ಎರಡು ವರ್ಷಗಳಲ್ಲಿ ಅವಳಿ ನಗರ ಡ್ರಗ್ಸ್ ಮುಕ್ತ

▶▶ ಮೊದಲನೇ ಪುಟದಿಂದ

ಕಳೆದ ಎರಡು ವರ್ಷದಿಂದ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ವೈಫಲ್ಯ ಕಂಡಿಲ್ಲ. ಕರಾವಳಿ ಭಾಗದಲ್ಲಿ ಕೋಮುಗಲಭೆಯನ್ನು ಹತ್ತಿಕ್ಕಲು ಕೋಮುವಾದಿ ಚಟುವಟಿಕೆ ವಿರೋಧಿ ತಂಡ ರಚನೆ ಮಾಡಲಾಗಿತ್ತು. ಮೂರು ತಿಂಗಳ ಒಳಗಾಗಿ ಕೋಮು ಗಲಭೆಗಳನ್ನು ನಿಯಂತ್ರಣಕ್ಕೆ ತರಲಾಯಿತು. ಪೊಲೀಸರು ಅಸಹಾಯಕರು ಎನ್ನುವ ಸಂದರ್ಭ ಬಂದಿಲ್ಲ ಎಂದು ಅವರು ಹೇಳಿದರು.

ದೇಶದಲ್ಲಿಯೇ ಕರ್ನಾಟಕ ಪೊಲೀಸ್ ಇಲಾಖೆ ನಂಬರ್ ಒನ್ ಸ್ಥಾನದಲ್ಲಿದೆ. ಟೀಕೆ, ಟಿಪ್ಪಣಿಗಳು ಬರುವುದು ಸಹಜ. ಟೀಕೆ, ಟಿಪ್ಪಣಿಗಳ ನಡುವೆ ಪೊಲೀಸ ಇಲಾಖೆ ಕಾರ್ಯ ನಿರ್ವಹಿಸಬೇಕಾಗಿದೆ. ಜನಸ್ಪಂದನೆ ನೀಡುವ ನಿಟ್ಟಿನಲ್ಲಿ ಪೊಲೀಸರು ಕರ್ತವ್ಯ ನಿರ್ವಹಿಸಬೇಕು.

ಶೇ. 95ರಷ್ಟು ಪ್ರಕರಣಗಳನ್ನು 48 ಗಂಟೆಗಳಲ್ಲಿ ಬಗೆಹರಿಸಲಾಗಿದೆ. ಹೊರ ರಾಜ್ಯದಲ್ಲಿರುವ ಅಪರಾಧಿಗಳನ್ನು ಸಹ ಬಂಧಿಸಲಾಗಿದೆ. ಅಲ್ಲದೇ ಸಾಮಾಜಿಕ ಜಾಲತಾಣದಲ್ಲಿ ಅವಹೇಳನಕಾರಿ ಪೋಸ್ಟ್ ಮಾಡಿದವರನ್ನು ಸಹ ಕೆಲವೇ ಗಂಟೆಗಳಲ್ಲಿ ಬಂಧಿಸಲಾಗುತ್ತಿದೆ ಎಂದರು.

ಶಾಸಕರಾದ ಎನ್.ಎಚ್. ಕೋನರಡ್ಡಿ ಮಾತನಾಡಿ, ಜನರೊಂದಿಗೆ ಉತ್ತಮ ಸಹಕಾರದಿಂದ ಪೊಲೀಸ್ ಇಲಾಖೆ ಕರ್ತವ್ಯ ನಿರ್ವಹಿಸಬೇಕಾಗುತ್ತದೆ. ಸಾರ್ವಜನಿಕರಿಗೆ ತೊಂದರೆ ನೀಡದೆ, ಜನರಿಗೆ ಸ್ಪಂದನೆ ನೀಡುತ್ತಾ ಕಾರ್ಯ ನಿರ್ವಹಣೆ ಮಾಡಬೇಕಿದೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ವಿ.ಪ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕರಾದ ಮಹೇಶ ಟೆಂಗಿನಕಾಯಿ, ಪ್ರದೀಪ ಶೆಟ್ಟರ, ಕರ್ನಾಟಕ ಬಾಲವಿಕಾಸ ಅಕಾಡೆಮಿಯ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ., ಜಿ.ಪಂ ಮುಖ್ಯ ಕಾರ್ಯ ನಿರ್ವಾಹಕಾಧಿಕಾರಿ ಸ್ವರೂಪ ಟಿ.ಕೆ., ಬೆಳಗಾವಿ ಉತ್ತರ ವಲಯದ ಆರಕ್ಷಕ ಮಹಾ ನಿರೀಕ್ಷಕ ವಿಕಾಸಕುಮಾರ ವಿಕಾಶ, ಪೊಲೀಸ್ ಆಯುಕ್ತ ಎನ್ ಶಶಿಕುಮಾರ್, ಹೆಚ್ಚುವರಿ ಪೊಲೀಸ್ ಅಧೀಕ್ಷಕ ನಾರಾಯಣ ಭರಮನಿ ಮುಂತಾದವರಿದ್ದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಗೋಪಾಲ್ ಬ್ಯಾಕೋಡ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು.

### ಕ್ಷಯ ರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್ ವಿತರಣಾ ಕಾರ್ಯಕ್ರಮ

# ಆರೋಗ್ಯದ ಕಡೆ ಗಮನ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಕ್ಷಯ ಮುಕ್ತ ರಾಷ್ಟ್ರ ನಿರ್ಮಿಸಲು ಎಲ್ಲರೂ ಶ್ರಮಿಸೋಣ ಎಂದು ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಅವರು ಹೇಳಿದರು.

ಮುಂಡರಗಿ ಪಟ್ಟಣದ ತಾಲೂಕ ಆಸ್ಪತ್ರೆ ಆವರಣದಲ್ಲಿ ಜಿಲ್ಲಾಡಳಿತ, ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಆಂದೋಲನ ಅಭಿಯಾನದ ಪ್ರಯುಕ್ತ ಕ್ಷಯರೋಗಿಗಳಿಗೆ ಚೈತನ್ಯ ಪೌಷ್ಠಿಕ ಪೂರಕ ಆಹಾರ ಕಿಟ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈ ಹಿಂದೆ ಕ್ಷಯ ರೋಗ ಬಗ್ಗೆ ಭಯದ ವಾತವಾರಣ ಇತ್ತು. ಇಂದು ಭಾರತದಲ್ಲಿ ಉತ್ತಮ ರೀತಿಯ ಔಷಧಿಗಳಿವೆ. ರೋಗಿಗಳು ಸರಿಯಾಗಿ 6 ತಿಂಗಳು ಚಿಕಿತ್ಸೆಯನ್ನು ಪಡೆಯಬೇಕು, ಎಲ್ಲರೂ ಆರೋಗ್ಯದ ಕಡೆ ಗಮನ ಹರಿಸಬೇಕು. ಕ್ಷಯ ರೋಗವು ಗುಣಮುಖವಾಗುವ ರೋಗವಾಗಿದೆ. ಹಾಗಾಗಿ ಭಯಪಡದೇ ಸರ್ಕಾರಿ ಆಸ್ಪತ್ರೆಯಲ್ಲಿ ದೊರೆಯುವ ಸೌಲಭ್ಯವನ್ನು ಸದುಪಯೋಗ ಪಡೆದುಕೊಂಡು ಪೌಷ್ಠಿಕ ಆಹಾರ ಸೇವಿಸಿ ಉತ್ತಮ ಜೀವನ ನಡೆಸಬೇಕು ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಹೇಮಗಿರೀಶ ಹಾವಿನಾಳ ಮಾತನಾಡಿ,



ಜೀವನದಲ್ಲಿ ಮನುಷ್ಯನಿಗೆ ಆರೋಗ್ಯ ತುಂಬಾ ಮುಖ್ಯವಾಗಿದ್ದು, ಎಷ್ಟೇ ಶ್ರೀಮಂತನಾಗಿ ದುಡ್ಡು ಹೊಂದಿದ್ದರೂ ಅನಾರೋಗ್ಯಕ್ಕೆ ತುತ್ತಾದ್ದಾಗ ಎಲ್ಲರೂ ಅಸಹಾಯಕರಾಗುತ್ತರೆ. ಹಾಗಾಗಿ ಉತ್ತಮ ಆರೋಗ್ಯ ಹೊಂದಿದ್ದರೆ ಜೀವನದಲ್ಲಿ ಏನನ್ನಾದರು ಸಾಧಿಸಬಹುದು ಎಂದು ಹೇಳಿದರು.

ವೃತ್ತಿಯಲ್ಲಿ ವೈದ್ಯರಾಗಿದ್ದ ಡಾ. ಚಂದ್ರು ಲಾಮಾಣಿ ಅವರು ಜನರ ಅಪೇಕ್ಷೆಯಿಂದ ಇಂದು ಶಾಸಕರಾಗಿ ಸದಾ ಬಡವರ ಬಗ್ಗೆ ಕಾಳಜಿ ಹೊಂದಿ ಆರೋಗ್ಯ, ಕುಡಿಯುವ ನೀರು, ಶಾಲಾ ಕೊಠಡಿಗಳ ಸುಧಾರಣೆ ಸೇರಿದಂತೆ ಕ್ಷೇತ್ರ ಅಭಿವೃದ್ಧಿ ಕಾರ್ಯಗಳಲ್ಲಿ ತೊಡಗಿದ್ದಾರೆ. ಹಾಗೇಯೇ ತಮ್ಮನ್ನು ಆರೋಗ್ಯ ರಕ್ಷಾ ಸಮಿತಿಯ ಸದಸ್ಯರಾಗಿ ಮಾಡಿ ಜನರ ಸಮಸ್ಯೆಗಳಿಗೆ ಸ್ಪಂದಿಸಲು ಶಕ್ತಿ ತುಂಬಿದ್ದಾರೆ ಎಂದರು.

> ಸಾರ್ವಜನಿಕರು ಸುಖಾಸುಮ್ಮನೆ ವೈದ್ಯರನ್ನು ದೂಷಿಸುವುದನ್ನು ಬಿಟ್ಟು ವೈದ್ಯರ ಮೇಲೆ ಭರವಸೆ, ನಂಬಿಕೆ ಇಟ್ಟು ಪರಿಸ್ಥಿತಿಯನ್ನು ಅರಿತುಕೊಂಡು ವೈದ್ಯರಿಗೆ ಸಹಕಾರ ನೀಡಬೇಕು. ಹಾಗೇ ಎಲ್ಲರೂ ಊಟದ ಪದ್ಧತಿಯನ್ನು ಚೆನ್ನಾಗಿಟ್ಟುಕೊಳ್ಳಬೇಕು. 18–20 ವಯಸ್ಸಿನ ಯುವಕರು ಹೃದಯಾಘಾತದಿಂದ ಮರಣ ಹೊಂದುತ್ತಿದ್ದಾರೆ. ಹಾಗಾಗಿ ಎಲ್ಲಾ ಯುವಕರ ಆರೋಗ್ಯ ಬಗ್ಗೆ ಗಮನಹರಿಸಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಅರುಂಧತಿ ಕುಲಕರ್ಣಿ ಮಾತನಾಡಿ, 100 ದಿನದ ಕ್ಷಯರೋಗ ನಿರ್ಮೂಲನೆ ಅಭಿಯಾನ ಯಶಸ್ವಿಯಾಗಿ ಮುಂದುವರೆಯುತ್ತಿದೆ. ವಿಶ್ವದೊಳಗೆ ಅತೀ ಹೆಚ್ಚು ಕ್ಷಯ ರೋಗಿಗಳು ಭಾರತದಲ್ಲಿದ್ದಾರೆ. ಕೇಂದ್ರ ಮತ್ತು ರಾಜ್ಯ ಸರ್ಕಾರ ಆರೋಗ್ಯ ಇಲಾಖೆ ಸಹಯೋಗದೊಂದಿಗೆ ಕ್ಷಯರೋಗ ಮುಕ್ತ ಭಾರತ ನಿರ್ಮಿಸುವುದು ಸಮಾಜದ ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ. ಕ್ಷಯ ರೋಗಿಗಳು ಯಾವುದೇ ಭಯಪಡದೇ ಉಚಿತವಾಗಿ ದೊರೆಯುವ ಚಿಕಿತ್ಸೆ ಪಡೆಯಬೇಕು ಎಂದು ಹೇಳಿದರು.

ಕುಮಾರಸ್ವಾಮಿ ಹೀರೆಮಠ, ಆರೋಗ್ಯ ನಿರೀಕ್ಷಣಾಧಿಕಾರಿ ಎ.ಎ. ಅಳವಂಡಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರದ ಕಿಟ್‌ಗಳನ್ನು ವಿತರಿಸಿದರು. ಕಾರ್ಯಕ್ರಮದಲ್ಲಿ ಪುರಸಭೆ ಸದ್ಯಸೆ ಜ್ಯೋತಿ ಹಾನಗಲ್, ಅಂದಾಪ್ಪ ಉಳ್ಳಾಗಡ್ಡಿ, ಜಾನು ಲಮಾಣಿ, ತಾಲೂಕಾ ವೈದ್ಯಾಧಿಕಾರಿ ಡಾ. ಲಕ್ಷ್ಮಣ ಪೂಜಾರ, ಪುರಸಭೆ ಸದಸ್ಯರು ಸೇರಿದಂತೆ ಗಣ್ಯರು ಹಾಜರಿದ್ದರು.

ಜಯಶ್ರೀ ಮತ್ತು ತಂಡದವರು ಪ್ರಾರ್ಥನಾ ಗೀತೆ ಪ್ರಸ್ತುತಪಡಿಸಿದರು. ಆರೋಗ್ಯ ಶಿಕ್ಷಣಾಧಿಕಾರಿ ಎಮ್. ಎಸ್. ಸಜ್ಜನ ಸ್ವಾಗತಿಸಿದರು. ಈರಮ್ಮ ಕುಂದಗೋಳ ಕಾರ್ಯಕ್ರಮ ನಿರೂಪಿಸಿದರು.

# ಧ್ಯಾನದಿಂದ ಮನಸ್ಸನ್ನು ನಿಯಂತ್ರಿಸಬಹುದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಶ್ರೀಮಾನ್ ಬಿ.ಡಿ. ತಟ್ಟಿ ಅಣ್ಣಾವರು ಮೆಮೊರಿಯಲ್ ಚಾರಿಟೇಬಲ್ ಟ್ರಸ್ಟ್ ವಿಶೇಷ ಚೇತನ ಮಕ್ಕಳ ವಸತಿಯುತ ಶಾಲೆಯಲ್ಲಿ ವಿಶ್ವ ಧ್ಯಾನ ದಿನಾಚರಣೆ ಹಾಗೂ ವಾರ್ಷಿಕೋತ್ಸವ ಕಾರ್ಯಕ್ರಮ ಜರುಗಿತು.

ಕಾರ್ಯಕ್ರಮವನ್ನು ಹುಬ್ಬಳ್ಳಿಯ ಧ್ಯಾನ ಪರಿಣಿತೆ ಗುರುಮಾತೆ ಪೂರ್ಣಿಮಾ ಅಣ್ಣಪ್ಪನವರ ಉದ್ಘಾಟಿಸಿ ಮಾತನಾಡಿ, ಧ್ಯಾನ ಎಂದರೆ ಮುಕ್ತಿ. ನಮ್ಮ ದೇಹದ ಮೇಲಿನ ನಿಯಂತ್ರಣಕ್ಕೆ ಧ್ಯಾನ ಅತ್ಯಂತ ಉಪಯುಕ್ತವಾಗಿದೆ. ನಮ್ಮ ಮನಸ್ಸನ್ನು ನಿಯಂತ್ರಣದಲ್ಲಿಟ್ಟು ಧ್ಯಾನ ಮಗ್ನರಾದಾಗ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ. ಧ್ಯಾನದಿಂದ ಮನಸನ್ನು ನಿಯಂತ್ರಿಸಲು ಸಾಧ್ಯ. ಅಲ್ಲದೆ ಇದರಿಂದ ಮೆದುಳಿನ ಮೇಲೆಯೂ ವಿಶೇಷ ಪರಿಣಾಮ ಬೀರುತ್ತದೆ. ಮಕ್ಕಳಿಗೆ ಇದು ಹೆಚ್ಚು ಉಪಯೋಗವಾಗುತ್ತದೆ ಎಂದು ಹೇಳಿದರು.



ಅಧ್ಯಕ್ಷತೆ ವಹಿಸಿದ ಸಂಸ್ಥೆಯ ಗೌರವ ಕಾರ್ಯದರ್ಶಿ ಸೋಮನಾಥ ಮಹಾಜನಶೆಟ್ಟರ ಮಾತನಾಡಿ, ಮಕ್ಕಳ ಮನಸ್ಸು ನಿಯಂತ್ರಣದಲ್ಲಿರಬೇಕಾದರೆ ಧ್ಯಾನ ಅತಿ ಮುಖ್ಯ. ಧ್ಯಾನದಿಂದ ಮಕ್ಕಳಲ್ಲಿ ಜ್ಞಾನ ಅಭಿವೃದ್ಧಿಯಾಗುತ್ತದೆ ಎಂದರು.

ಓಂ ಶಾಂತಿ ಈಶ್ವರಿಯ ವಿದ್ಯಾಲಯದ ನಾಗಲಾಂಬಿಕೆ ಅಕ್ಕನವರು ಮಾತನಾಡಿ, ಯೋಗ ಎಂದರೆ ಮನಸ್ಸು ಮತ್ತು ಬುದ್ಧಿಯನ್ನು ಸ್ಥಿರವಾಗಿಸುವುದು. ಧ್ಯಾನ ಮಾಡುವುದರಿಂದ ಮನಸ್ಸಿನ ಆಂತರಿಕ ಸಂತೋಷ ಹೆಚ್ಚಾಗುತ್ತದೆ. ದೇಗುಲ ಎಂಬ ಸಂಸ್ಥೆಯಲ್ಲಿ ಪರಮಾತ್ಮನ ರೂಪದಲ್ಲಿ ವಿಶೇಷ ಚೇತನ ಮಕ್ಕಳ ಸೇವೆಯನ್ನು ಮಾಡುತ್ತಿರುವ ಈ ಸಂಸ್ಥೆಯ ಗೌರವ ಕಾರ್ಯದರ್ಶಿಯವರ ಕಾರ್ಯ ಶ್ಲಾಘನೀಯ ಎಂದರು.

ಇನ್ನೋರ್ವ ಅತಿಥಿ ಶೀಲಾ ಪಾಟೀಲ ಮಾತನಾಡಿದರು. ಕಾರ್ಯಕ್ರಮದಲ್ಲಿ ಧ್ಯಾನ ಸಮಿತಿಯ ಸದಸ್ಯರುಗಳಾದ ಸುಭಾಷ ಓದುನವರ, ಜಿ.ಎಸ್. ಬಾಳೆಹಳ್ಳಿಮಠ, ಶಶಿಕಲಾ ವಡಕಣ್ಣವರ, ವೀಣಾ ಹತ್ತಿಕಾಳ ಭಾಗವಹಿಸಿದ್ದರು. ಶಾಲೆಯ ಮುಖ್ಯೋಪಾಧ್ಯಾಯೆ ಜಯಶ್ರೀ ಶೆಟ್ಟರ, ಶಿಕ್ಷಕಿ ಪ್ರತಿಮಾ ಮಹಾಜನ್‌ಶೆಟ್ಟರ, ಶಿಕ್ಷಕ ಜಿ.ಪಿ. ಪವಾರ ಉಪಸ್ಥಿತರಿದ್ದರು. ಸುಮಾ ಶೆಟ್ಟರ ಸ್ವಾಗತಿಸಿದರು, ಗೀತಾ ಬಾಳೋಜಿ ಕಾರ್ಯಕ್ರಮ ನಿರೂಪಿಸಿದರು, ಅಕ್ಷತಾ ವಂದಿಸಿದರು. ಲಕ್ಷ್ಮೀ ರಬ್ಬನಗೌಡ್ರ ಕಾರ್ಯಕ್ರಮ ಅನುವಾದಿಸಿದರು.

# ಪ್ರತಿ ಕ್ಷಣದಲ್ಲೂ ಗಣಿತ ಅಡಗಿದೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನಿತ್ಯ ಜೀವನದಲ್ಲಿ ಅಂಕಿ–ಸಂಖ್ಯೆಗಳಿದಲ್ಲದೆ ಬದುಕಿಲ್ಲ. ಕೇವಲ ವರ್ಗಕೋಣೆಯಲ್ಲಿನ ಗಣಿತ ಕಲಿಕೆಗೆ ಸೀಮಿತವಾಗದೆ ಜೀವನದ ಪ್ರತಿ ಕ್ಷಣದಲ್ಲೂ ಗಣಿತ ಅಡಗಿದೆ ಎಂಬುದನ್ನು ನೀವು ಅರಿಯಬೇಕು ಎಂದು ಎಸ್‌ಎವಿವಿಪಿ ಸಮಿತಿಯ ಆಡಳಿತಾಧಿಕಾರಿ ಎನ್.ಆರ್. ಗೌಡರ ಹೇಳಿದರು.

ಸಮೀಪದ ನಿಡಗುಂದಿಯ ಶ್ರೀ ಅನ್ನದಾನೇಶ್ವರ ಪ್ರೌಢಶಾಲೆಯಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ಗಣಿತ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಣಿತವನ್ನು ಕಬ್ಬಿಣದ ಕಡಲೆ ಎನ್ನುವದು ತಪ್ಪು. ಆಸಕ್ತಿಯಿಂದ ಅಧ್ಯಯನ ಮಾಡಿದಾಗ ಯಾವುದೇ ವಿಷಯ ಕಷ್ಟವಲ್ಲ. ಮಕ್ಕಳು ಮೊಬೈಲ್ ಗೀಳಿನಿಂದ ದೂರವಿದ್ದು ಕಲಿಕೆಯತ್ತ ಗಮನ ಹರಿಸಿದಾಗ ಜೀವನದಲ್ಲಿ ಸಾಧನೆ ಮಾಡಲು ಸಾಧ್ಯ ಎಂದರು.

ಕೆವಿಬಿಎಂ ಉಚಿತ ಪ್ರಸಾದ




ನಿಲಯದ ಚೇರಮನ್ ಮಲ್ಲಿಕಾರ್ಜುನ ಮೆಣಸಗಿ ಮಾತನಾಡಿ, ಮಕ್ಕಳಿಗೆ ಬಾಲ್ಯದಿಂದಲೇ ಸಂಸ್ಕಾರ ಮತ್ತು ಸಂಸ್ಕೃತಿಯ ಬಗ್ಗೆ ತಿಳುವಳಿಕೆ ನೀಡುವ ಕಾರ್ಯವಾಗಬೇಕು. ತಂದೆ–ತಾಯಿ, ಗುರುಗಳ ಪರಿಶ್ರಮ ಸಾರ್ಥಕವಾಗಬೇಕಾದರೆ ವಿದ್ಯಾರ್ಥಿಗಳು ಅಧ್ಯಯನಶೀಲತೆಯನ್ನು ಮೈಗೂಡಿಸಿಕೊಳ್ಳಬೇಕು. ಲಭ್ಯ ಪರಿಕರ ಬಳಸಿ, ಮೊಬೈಲ್ ದೂರ ಸರಿಸಿ ಉನ್ನತ ಗಣಿತ ಅಧ್ಯಯನ ಮಾಡಬೇಕು ಎಂದರು.

ವಿದ್ಯಾರ್ಥಿಗಳಿಗೆ ಮಗ್ಗಿ ಸ್ಪರ್ಧೆ, ಸೂತ್ರ ಹೇಳುವ ಸ್ಪರ್ಧೆ, ಗಣಿತದ ಒಗಟುಗಳ ಸ್ಪರ್ಧೆಗಳನ್ನು ನಡೆಸಲಾಯಿತು. ಶಾಲಾ ಆಡಳಿತ ಮಂಡಳಿ ಚೇರಮನ್ ಜಗದೀಶ ಕರಡಿ, ಮುಖ್ಯ ಶಿಕ್ಷಕ ಕೆ.ಪಿ. ರಾಠೋಡ, ಎಸ್.ಐ. ದಿಂಡೂರ, ಎಂ.ಬಿ. ಕೊಪ್ಪದ, ಎಚ್.ಬಿ. ಕಟ್ಟಿಮನಿ, ಗಣಿತ ಶಿಕ್ಷಕ ಎಸ್.ವಿ. ಹಳ್ಳಿಕೇರಿ, ಕೆ.ಬಿ. ಗಡಾದ, ಎಸ್.ಬಿ. ಹಿರೇಮಠ, ಎಸ್.ಬಿ. ಅಳೆಹೊನ್ನಪ್ಪನವರ, ವಿ.ಎಸ್. ಅರಮನಿ ಇದ್ದರು.



ಲಕ್ಕುಂಡಿಯಲ್ಲಿ ಲಕ್ಕುಂಡಿ ಗ್ರಾಮೀಣ ವಿದ್ಯಾವರ್ಧಕ ಸಂಸ್ಥೆಯ ಬಾಪೂಜಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ರೈತ ದಿನಾಚರಣೆಯನ್ನು ಸಂಭ್ರಮದಿಂದ ಆಚರಿಸಲಾಯಿತು. 1ನೇ ತರಗತಿ ವಿದ್ಯಾರ್ಥಿ ಮಣಿಕಂಠ ಬಡಿಗೇರ ರೈತನ ವೇಷ ಧರಿಸಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದು ಗಮನ ಸೆಳೆಯಿತು.

# ಗಾಂಧೀಜಿ ಪುತ್ಥಳಿ ಅನಾವರಣ ಡಿ. 27ಕ್ಕೆ

▶▶ ಮೊದಲನೇ ಪುಟದಿಂದ

ಸ್ವಾತಂತ್ರ್ಯಕ್ಕಾಗಿ ತ್ಯಾಗ ಮಾಡಿದ ಹಾಗೂ ಹೋರಾಡಿದ ಯೋಧರನ್ನು ಮರೆಯಬಾರದು. ನೈಜವಾಗಿ ದುಡಿದವರ ಸೇವೆ ಸ್ಮರಿಸಬೇಕು ಇದು ನಮ್ಮ ಕರ್ತವ್ಯ ಎಂದು ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಮ್ಮ ಮನೆಯಲ್ಲಿ 16 ಜನ ಜೈಲು ವಾಸ ಅನುಭವಿಸಿದ್ದಾರೆ. 13 ಜನ ಸ್ವಾತಂತ್ರ್ಯಕ್ಕಾಗಿ, 3 ಜನ ಗೋವಾ ವಿಮೋಚನೆಗಾಗಿ ಹೋರಾಡಿದ್ದಾರೆ. ಗಾಂಧೀಜಿ ಜೊತೆ ನಮ್ಮ ತಂದೆ ನಿಕಟ ಸಂಪರ್ಕ ಹೊಂದಿದ್ದರು. ಚಿಕ್ಕಪ್ಪ ಬೆಳಗಾವಿಯಲ್ಲಿ ಅಧಿವೇಶನವಾಗಬೇಕೆಂದು ಬಯಸಿದ್ದರು. ಆದರೆ 1923ರಲ್ಲಿ ತೀರಿಕೊಂಡರು. ಲೋಕಮಾನ್ಯ ಟಿಳಕರಿಂದ ಸ್ಫೂರ್ತಿ ಪಡೆದಿದ್ದರು. ಗಾಂಧೀಜಿ ಬೆಳಗಾವಿಗೆ ಭೇಟಿ ಕೊಟ್ಟಾಗಲೆಲ್ಲಾ ನಮ್ಮ ಮನೆತನ ಸೇವೆ ಸಲ್ಲಿಸಿದೆ ಎಂದು ವಿಠ್ಠಲರಾವ ಯಾಳಗಿ ಅವರು ಹೆಮ್ಮೆಯಿಂದ ಮೆಲಕು ಹಾಕಿದರು. ಸರ್ಕಾರ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸೇನಾನಿಗಳನ್ನು ಸ್ಮರಿಸುತ್ತಿರುವುದು ನಮಗೆಲ್ಲಾ ಸಂತಸ ತಂದಿದೆ. ಸರ್ಕಾರಕ್ಕೆ ಸ್ವಾತಂತ್ರ್ಯ ಯೋಧರ ಕುಂಟುಬದ ಪರವಾಗಿ ಕೃತಜ್ಞತೆಗಳನ್ನು ಸಲ್ಲಿಸುವೆ ಎಂದರು.

ಸ್ವಾತಂತ್ರ್ಯ ಯೋಧರ ಕುಟುಂಬದ ಸದಸ್ಯರು ಮಹಾತ್ಮ ಗಾಂಧೀಜಿ ಪುತ್ಥಳಿ ಅನಾವರಣ ಕಾರ್ಯಕ್ರಮಕ್ಕೆ ಆಗಮಿಸಲು ಸರ್ಕಾರದ ಪರವಾಗಿ ಸಚಿವ ಹೆಚ್.ಕೆ. ಪಾಟೀಲರು ಆಹ್ವಾನ ನೀಡಿದರು.

ನಂತರ ಸಚಿವ ಎಚ್.ಕೆ. ಪಾಟೀಲರು ಸುವರ್ಣಸೌಧಕ್ಕೆ ತೆರಳಿ ಮಹಾತ್ಮ ಗಾಂಧಿ ಪುತ್ಥಳಿ ಅನಾವರಣ ಸಿದ್ಧತೆಯನ್ನು ಪರಿಶಿಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಮೊಹಮ್ಮದ ರೋಷನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಭೀಮಾಶಂಕರ ಗುಳೇದ ಮತ್ತಿತರು ಹಾಜರಿದ್ದರು.

## ನಿಧನ

**ಶಾಂತಮ್ಮ ಶಿವನಗೌಡ ಹಿರೇಗೌಡರ**



ನರೇಗಲ್ಲ: ಸಮೀಪದ ಕೋಡಿಕೊಪ್ಪ ಗ್ರಾಮದ ನಿವಾಸಿ, ಶತಾಯುಷಿ ಶಾಂತಮ್ಮ ಶಿವನಗೌಡ ಹಿರೇಗೌಡರ (101) ಮಂಗಳವಾರ ನಿಧನ ಹೊಂದಿದರು. ಮೃತರು ಇಬ್ಬರು ಪುತ್ರರು, ಮೂವರು ಪುತ್ರಿಯರನ್ನು ಅಗಲಿದ್ದಾರೆ.

# ಪೋಲಂಡ್‌ನಲ್ಲಿ ಕನ್ನಡದ ಕಂಪು

■ ವಿಜಯಸಾಕ್ಷಿ ಸುದ್ದಿ, ಗದಗ



ಇತ್ತೀಚೆಗೆ ಮಂಡ್ಯದಲ್ಲಿ 87ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಹೊರನಾಡ ಕನ್ನಡಿಗರಿಗಾಗಿಯೇ ಮೊಟ್ಟ ಮೊದಲ ಬಾರಿಗೆ ಗೋಷ್ಠಿ ಏರ್ಪಡಿಸಿದ್ದು ಸ್ವಾಗತಾರ್ಹವಾದದ್ದು. ಸ್ವತಃ ಮಹೇಶ ಜೋಶಿಯವರೇ ಖುದ್ದಾಗಿ ಹಲವಾರು ರಾಷ್ಟ್ರಗಳನ್ನು ಸಂದರ್ಶಿಸಿ ಅಲ್ಲಿನ ಕನ್ನಡ ಸಂಘಟಕರನ್ನು ಭೇಟಿಯಾಗಿ ಆಹ್ವಾನಿಸಿದ್ದರಿಂದ ಐರೋಪ್ಯ ಹಾಗೂ ವಿವಿಧ ರಾಷ್ಟ್ರಗಳ 180 ಜನ ಪ್ರತಿನಿಧಿಗಳು ಆಗಮಿಸಿ ಅಲ್ಲಿನ ಚಟುವಟಿಕೆ, ಕಾರ್ಯಕ್ರಮಗಳ ಬಗ್ಗೆ ಸಂತೋಷ ಹಂಚಿಕೊಂಡರು.

ತಾವು ಅನಿವಾಸಿ ಭಾರತೀಯರಾದರೂ, ವಿದೇಶದಲ್ಲಿದ್ದು ಮಕ್ಕಳಿಗೆ ಕನ್ನಡ ಕಲಿಕೆ, ನಾಡು–ನುಡಿಯ ಬಗ್ಗೆ ಅಭಿಮಾನ, ನೃತ್ಯ–ಕಲೆ, ಸಂಗೀತಗಳಂಥ ಸಾಂಸ್ಕೃತಿಕ ಸಭೆ ಸಂಘಟಿಸಿದ್ದಲ್ಲದೆ ಶಿವರಾತ್ರಿ, ದೀಪಾವಳಿ, ಯುಗಾದಿ, ರಾಜ್ಯೋತ್ಸವಗಳಂಥ ರಾಷ್ಟ್ರೀಯ ಮತ್ತು ಧಾರ್ಮಿಕ ಆಚರಣೆಗಳನ್ನು ಪರಿಚಯಿಸಿದ್ದು ಸ್ತುತ್ಯಾರ್ಹ. ಇಂಥ ಕಾರ್ಯಕ್ರಮಗಳಿಗೆ ಧನಸಹಾಯ ಅವಶ್ಯವಿರುವುದರಿಂದ ಅಲ್ಲಿನ ಸ್ಥಳೀಯರ ಸಹಾಯ ಸಹಕಾರ ಪಡೆದು ಯಶಸ್ವಿಯಾಗಿಸಿದ್ದಾರೆ.

ಪೋಲಂಡ್‌ನಲ್ಲಿ ಕನ್ನಡಿಗರ ಸಂಘ ಮತ್ತು ರಾಸ್ಲಾ ಕನ್ನಡ ಸಂಘದ ಸಂಯುಕ್ತಾಶ್ರಯದೊಂದಿಗೆ ಕಳೆದ ಏಳು ವರ್ಷಗಳಿಂದ ಅಲ್ಲಿನ ಕನ್ನಡಿಗ ನಗರದ ಪಂಚಾಕ್ಷರಿ ಲಕ್ಷ್ಮೇಶ್ವರಮಠ ಹಾಗೂ ಸಚಿನ್ ನಿರಂತರ ಶ್ರಮಿಸುತ್ತಿದ್ದಾರೆ. ಇವರ ಸಾಧನೆ ಪರಿಗಣಿಸಿ ಮಹೇಶ ಜೋಶಿ, ಮೋಹನ ಚುಂತಾರು ಮತ್ತು ನಿವೇದಿತಾ ಹಾವನೂರು (ಹೊನ್ನತ್ತಿ) ಅವರು ನಿರಂತರ ಸಂಪರ್ಕದಲ್ಲಿದ್ದು, ಆಹ್ವಾನಿಸಿ ವೇದಿಕೆಯಲ್ಲಿ ಅವರಿಗಾಗಿಯೇ ಪ್ರತ್ಯೇಕ ಗೋಷ್ಠಿ ಏರ್ಪಡಿಸಿ ನೆನಪಿನ ಕಾಣಿಕೆ ನೀಡಿ ಗೌರವಿಸಿದರು.

ಇದೇ ಸಮಯದಲ್ಲಿ ಕರ್ನಾಟಕ ಸರ್ಕಾರವು ಇಂತ ಸಂಘಟನೆಗಳಿಗೆ ಧನ ಸಹಾಯ ನೀಡಿದರೆ ವಿದೇಶಿ ಕನ್ನಡಿಗರನ್ನು ಪ್ರೋತ್ಸಾಹಿಸಿದಂತಾಗುತ್ತದೆ ಎಂದು ಸರ್ಕಾರದ ಗಮನ ಸೆಳೆದರು. ಪಂಚಾಕ್ಷರಿ ಲಕ್ಷ್ಮೇಶ್ವರಮಠ ಅವರು ನಗರದ ಸಾಹಿತಿ ಎಫ್.ಪಿ. ಲಕ್ಷ್ಮೇಶ್ವರಮಠರ ಪುತ್ರರಾಗಿದ್ದಾರೆ.

# ವಿಡಿಎಸ್ ಕ್ಲಾಸಿಕ್ ಶಾಲೆಯಲ್ಲಿ ಗಣಿತ ದಿನಾಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿಯ ಕ್ಲಾಸಿಕ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪ್ರಸಿದ್ಧ ಗಣಿತ ತಜ್ಞರಾದ ಸರ್ ಶ್ರೀನಿವಾಸ ರಾಮಾನುಜನ್ ಅವರ ಜನ್ಮದಿನದ ಗೌರವಾರ್ಥವಾಗಿ ಸ್ವತಃ ವಿದ್ಯಾರ್ಥಿಗಳೇ ತಯಾರಿಸಿದ ಗಣಿತ ಕಲಿಕೋಪಕರಣಗಳ ಮಾದರಿಗಳ ಪ್ರದರ್ಶನದ ಮೂಲಕ ರಾಷ್ಟ್ರೀಯ ಗಣಿತ ದಿನವನ್ನು ಆಚರಿಸಲಾಯಿತು.

ಸಂಸ್ಥೆಯ ಶೈಕ್ಷಣಿಕ ಮಾರ್ಗದರ್ಶಕರಾದ ಪ್ರತೀಕ ಎಸ್. ಹುಯಿಲಗೋಳ ಹಾಗೂ ಕ್ಲಸ್ಟರ್ ಸಂಖ್ಯೆ 4ರ ಸಮೂಹ ಸಂಪನ್ಮೂಲ ಅಧಿಕಾರಿಗಳಾದ ರವಿ ಹೆಬ್ಬಳ್ಳಿ ಗಣಿತ ಶಾಸ್ತ್ರಜ್ಞ ಸರ್ ಶ್ರೀನಿವಾಸ ರಾಮಾನುಜನ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ನಂತರ ವಿದ್ಯಾರ್ಥಿಗಳು ತಯಾರಿಸಿದ ಗಣಿತ ಕಲಿಕಾ ಮಾದರಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಶಾಲೆಯ ಶಿಕ್ಷಕಿ ರೇಣುಕಾ ವೆಂಕಟಾಪುರ, ಗಣಿತ ಕಲಿಕಾ ಮಾದರಿಗಳನ್ನು ತಯಾರಿಸಲು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ ಗಣಿತ ಶಿಕ್ಷಕಿ ಎಸ್.ವಿ. ಮೇಲಗಿರಿ, ಅರ್ಚನಾ ಗಿರಿತಿಮ್ಮಣ್ಣವರ, ಶಾಲೆಯ ಸಮಸ್ತ ಶಿಕ್ಷಕ ವೃಂದ, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

# ಗಾಯಾಳು ಅಯ್ಯಪ್ಪ ಮಾಲಾಧಾರಿಗಳಿಗೆ ಪರಿಹಾರ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೋನಿಯ ಈಶ್ವರ ದೇವಸ್ಥಾನದಲ್ಲಿ ಅಡುಗೆ ಅನಿಲ (ಸಿಲಿಂಡರ್) ಸ್ಫೋಟದಲ್ಲಿ ಗಂಭೀರವಾಗಿ ಗಾಯಗೊಂಡು ಕಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಒಂಬತ್ತು ಅಯ್ಯಪ್ಪ ಮಾಲಾಧಾರಿಗಳಿಗೆ ರಾಜ್ಯ ಸರ್ಕಾರ ಮುಖ್ಯ ಮಂತ್ರಿಗಳ ಪರಿಹಾರ ನಿಧಿಯಿಂದ ತಲಾ 5 ಲಕ್ಷ ರೂಪಾಯಿಗಳನ್ನು ನೀಡಬೇಕು ಮತ್ತು ಗಾಯಾಳುಗಳಿಗೆ ಉತ್ತಮ ಗುಣಮಟ್ಟದ ಚಿಕಿತ್ಸೆ ನೀಡಬೇಕು ಎಂದು ಮಣಿಕಂಠ ಸನ್ನಿಧಾನದ ಗುರುಸ್ವಾಮಿಗಳು ಹಾಗೂ ಶಬರಿಮಲೈ ಅಯ್ಯಪ್ಪ ಸೇವಾ ಸಮಾಜಂ ನ ಕರ್ನಾಟಕ ರಾಜ್ಯ ಸಹ ಕಾರ್ಯದರ್ಶಿ ನಾಗರಾಜ ಬಾಗಲಕೋಟ ಸರ್ಕಾಕ್ಕೆ ಆಗ್ರಹಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಭಾನುವಾರ ತಡರಾತ್ರಿ ಹುಬ್ಬಳ್ಳಿಯ ಸಾಯಿನಗರದ ಅಚ್ಚವ್ವನ ಕಾಲೋನಿಯ ಈಶ್ವರ ದೇವಸ್ಥಾನದಲ್ಲಿ ಅಡುಗೆ ಅನಿಲ (ಸಿಲಿಂಡರ್) ಸ್ಫೋಟಗೊಂಡಿದ್ದು ಎಲ್ಲ ಅಯ್ಯಪ್ಪ ಮಾಲಾದಾರಿಗಳಿಗೆ ನೋವನುಂಟುಮಾಡಿದೆ. ಸ್ಫೋಟದ ತೀವ್ರತೆಗೆ 9 ಮಾಲಾದಾರಾ ಸ್ವಾಮಿಗಳ ದೇಹವು 50% ಸುಟ್ಟು ಗಾಯಗಳಾಗಿವೆ. ಈ ಘಟನೆ ನಡೆಯಬಾರದಿತ್ತು. ಗಾಯಾಳಗಳ ಕುಟುಂಬದ ಜೊತೆಗೆ ನಾವು ಜೊತೆಗಿದ್ದೇವೆ. ಅಯ್ಯಪ್ಪ ಸ್ವಾಮಿ ಬೇಗ ಅವರಿಗೆ ಗುಣಮುಖರನ್ನಾಗಿ ಮಾಡಲಿ ಎಂದು ಹಾರೈಸಿದ್ದಾರೆ.

## ಸಂವಿಧಾನ ಶಿಲ್ಪಿ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಕುರಿತು ಕೇಂದ್ರ ಸಚಿವ ಅಮಿತ್ ಶಾ ನೀಡಿರುವ ಹೇಳಿಕೆ ಖಂಡಿಸಿ ವಿವಿಧ ಸಂಘಟನೆಗಳು ಕರೆ ನೀಡಿದ್ದ ಗದಗ-ಬೆಟಗೇರಿ ಬಂದ್ ಹಿನ್ನೆಲೆಯಲ್ಲಿ ಅವಳಿ ನಗರದಲ್ಲಿ ಮಂಗಳವಾರ ಕಂಡು ಬಂದ ದೃಶ್ಯಗಳು...











### ಬೆಂಗಳೂರು ಅಂತಾರಾಷ್ಟ್ರೀಯ ವಸ್ತು ಪ್ರದರ್ಶನದಲ್ಲಿ ಲಕ್ಕುಂಡಿ ಶಾಲೆಯ ಬಾಲಕಿಯರು

# ಗಮನಸೆಳೆದ ಸೊಳ್ಳೆ ಬತ್ತಿ, ಹೇರ್ ಆಯಿಲ್



■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಕರ್ನಾಟಕವನ್ನು ನಾವೀನ್ಯತೆ ಮತ್ತು ತಂತ್ರಜ್ಞಾನ ನಾಯಕತ್ವದ ಜಾಗತೀಕ ಕೇಂದ್ರವನ್ನಾಗಿ ಮಾಡುವ ಉದ್ದೇಶದಿಂದ ಬೆಂಗಳೂರಿನಲ್ಲಿ ಇತ್ತೀಚೆಗೆ ಏರ್ಪಡಿಸಿದ್ದ ಅಂತಾರಾಷ್ಟ್ರೀಯ ವಸ್ತು ಪ್ರದರ್ಶನದಲ್ಲಿ ಇಲ್ಲಿಯ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸಾಮಾಜಿಕ ವಿಜ್ಞಾನ ವಿಷಯ ಶಿಕ್ಷಕರಾದ ಕೀರ್ತಿ ಮ್ಯಾಗೇರಿ ಅವರ ಮಾರ್ಗದರ್ಶನದಲ್ಲಿ 10 ಬಾಲಕಿಯರು ಭಾಗವಹಿಸಿದ್ದರು. ವಿದ್ಯಾರ್ಥಿ ಅನಸೂಯಾ ವಡ್ಡರ ನೇತೃತ್ವದ ತಂಡವು ನೈಸರ್ಗಿಕವಾದ ಸೊಳ್ಳೆ ಬತ್ತಿಯನ್ನು ತಯಾರಿಸಿತ್ತು. ವಸ್ತು ಪ್ರದರ್ಶನದಲ್ಲಿ ಸೊಳ್ಳೆ ಬತ್ತಿ ತಯಾರಿಸಿದ ಬಗೆ ಮತ್ತು ಅವುಗಳಿಗೆ ಬೇಕಾಗುವ ಕಚ್ಚಾ ವಸ್ತುಗಳು ಮತ್ತು ಮನುಷ್ಯನ ಆರೋಗ್ಯದ ಮೇಲೆ ಯಾವುದೇ ದುಷ್ಪರಿಣಾಮಗಳನ್ನು ಬೀರದ ಹಾಗೆ ಸೊಳ್ಳೆಗಳು ನಾಶವಾಗುವ ಬಗೆಯನ್ನು ಕುರಿತು ವಿವರಿಸಿದಳು.

ಈ ತಂಡದಲ್ಲಿ ಪೂರ್ಣಿಮಾ, ಪ್ರೇಮಾ, ಅರ್ಚನಾ, ಐಶ್ವರ್ಯ ಇದ್ದರು. ಹೇಮಲತಾ ಕುಲಕರ್ಣಿ ನೇತೃತ್ವದಲ್ಲಿ ಹರ್ಬಲ್ ಹೇರ್ ಆಯಿಲ್ ತಯಾರಿಸಿ ಪ್ರದರ್ಶಿಸಲಾಯಿತು. ಈ ಕುರಿತು ವಸ್ತು ಪ್ರದರ್ಶನಕ್ಕೆ ಆಗಮಿಸಿದ್ದ ವೀಕ್ಷಕರಿಗೆ ಮಾಹಿತಿ ನೀಡಿದರು. ಈ ತಂಡದಲ್ಲಿ ವೈಷ್ಣವಿ, ಕಾವೇರಿ, ವಿಜಯಲಕ್ಷ್ಮೀ, ಲಕ್ಷ್ಮೀ ಸಹಕಾರ ನೀಡಿದರು. ಈ ಎರಡು ಉತ್ಪನ್ನಗಳನ್ನು ಟೈ ಗ್ಲೋಬಲ್ ಸಮ್ಮಿತ್‌ನಲ್ಲಿ ಪ್ರದರ್ಶಿಸಿದ್ದು ಎಲ್ಲರ ಗಮನ ಸೆಳೆಯಿತು.

ಗ್ರಾಮೀಣ ಭಾಗದ ಸರಕಾರಿ ಶಾಲೆಯ ಮಕ್ಕಳಿಗೆ ಬೆಂಗಳೂರು ಎನ್ನುವುದೇ ಒಂದು ಕನಸಾಗಿದ್ದು, ಇಂತಹ ಬೃಹತ್ ಉದ್ಯೋಗ ಮೇಳದಲ್ಲಿ ಲಕ್ಕುಂಡಿ ಶಾಲೆಯ ಮಕ್ಕಳು ಭಾಗವಹಿಸಿದ್ದು ಸೌಭಾಗ್ಯವಾಗಿದೆ. ತಾರೆ ಜಮೀನ್ ಪರ್ ಎಂಬ ಸಂಸ್ಥೆಯ ಗದಗ ಜಿಲ್ಲೆಯ ಸಂಘಟಿಕರಾದ ವಿಜಯಕುಮಾರ ಹಿರೇಮನಿ ಮತ್ತು ಸೂರ್ಯ ಅವರು ಗ್ರಾಮೀಣ ಭಾಗದ ಮಕ್ಕಳಲ್ಲಿ ವಿಜ್ಞಾನ ವಿಷಯದ ಮೂಲಕ ಔದ್ಯಮಿಕ ಶಿಕ್ಷಣ ನೀಡುವಲ್ಲಿ ನಮ್ಮ ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದು ವಿದ್ಯಾರ್ಥಿಗಳ ಭವಿಷ್ಯಕ್ಕೆ ನಾಂದಿಯಾಗಿದೆ ಎಂದು ವಿಜ್ಞಾನ ಶಿಕ್ಷಕಿ ಕೀರ್ತಿ ಮ್ಯಾಗೇರಿ ತಿಳಿಸಿದ್ದಾರೆ.

# ದೇಶವನ್ನು ಮುನ್ನಡೆಸಿದವರು ರೈತರು



■ **ವಿಜಯಸಾಕ್ಷಿ ಸುದ್ದಿ, ಗದಗ**

ಸಮಿಪದ ತಿಮ್ಮಾಪೂರ ಗ್ರಾಮದ ರೈತ ಸಂಘದ ನಾಮ ಫಲಕದ ಮುಂದೆ ರಾಷ್ಟ್ರೀಯ ರೈತ ದಿನಾಚರಣೆಯನ್ನು ಆಚರಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೈತ ಸಂಘದ ಗ್ರಾಮ ಘಟಕದ ಅಧ್ಯಕ್ಷ ಹುಚ್ಚೀರಪ್ಪ ಜೋಗಿನ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯ ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಮಾತನಾಡಿ, ಭಾರತವು ಹಳ್ಳಿಗಳಿಂದ ಕೂಡಿದ ಕೃಷಿ ಪ್ರಧಾನ ದೇಶವಾಗಿದೆ. ಅನಾದಿ ಕಾಲದಿಂದಲೂ ನಮ್ಮ ದೇಶವನ್ನು ಮುನ್ನಡೆಸಿದ್ದು ಈ ನಮ್ಮ ರೈತರೇ ಎಂಬುದು ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ರೈತ ಮುಖಂಡರಾದ ಪ್ರಧಾನಿ ದಿ. ಚೌಧರಿ ಚರಣ್ ಸಿಂಗ್ ಅವರ ಜನ್ಮದಿನದ ಸವಿನೆನಪಿಗಾಗಿ ಡಿಸೆಂಬರ್ 23ರಂದು ಭಾರತಾದ್ಯಂತ ರಾಷ್ಟ್ರೀಯ ರೈತ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಹನುಮಪ್ಪ ಜೋಗಿನ, ಕರಿಯಪ್ಪ ಬಾಬರಿ, ಮಾರುತಿ ರಾಮಣ್ಣ ಖಂಡ್ರೆ, ಪರಸಪ್ಪ ಬನಾಪೂರ, ನಿಂಗಪ್ಪ ಹೊಸಮನಿ, ರಾಮಪ್ಪ ಯತ್ನಟ್ಟಿ ಪ್ರಕಾಶ ಕುಂಬಾರ ಮುಂತಾದ ರೈತರು ಪಾಲ್ಗೊಂಡಿದ್ದರು.


**ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳ ಚರಂಡಿ ಮಂಡಳಿ**

ಕಾರ್ಯಪಾಲಕ ಅಭಿಯಂತರವರ ಕಛೇರಿ, ಕನನೀಸ ಮತ್ತು ಒ.ಚ.ಮಂಡಳಿ,
ವಿಭಾಗ ಕಛೇರಿ, ಧಾರವಾಡ, ಜಲಮಂಡಳಿ ಆವರಣ, ಸರ್.ಎಂ.ವಿಶ್ವೇಶ್ವರಯ್ಯ ರಸ್ತೆ,
ಧಾರವಾಡ-580 001 ದೂರವಾಣಿ: 0836-2213836 ಇ-ಮೇಲ್: eedwdm@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ**

ಈ ಕೆಳಗಿನ ಕಾಮಗಾರಿಗಳಿಗೆ ತಾಂತ್ರಿಕ ಮತ್ತು ಆರ್ಥಿಕ ಅರ್ಹತಾ ಅಗತ್ಯತೆಗಳನ್ನು ತೃಪ್ತಿಕರವಾಗಿ ಈಡೇರಿಸುವ ಸಂಸ್ಥೆ / ಗುತ್ತಿಗೆದಾರರಿಂದ ಕೆಳಕಂಡ ಕಾಮಗಾರಿಗಳಿಗೆ (ಮ್ಯಾನುಯಲ್ ಟೆಂಡರ್) ಆಹ್ವಾನಿಸಲಾಗಿದೆ. ಈ ಕಚೇರಿ **ಟೆಂಡರ ಪ್ರಕಟಣೆ ಸಂಖ್ಯೆ: 1564 ದಿನಾಂಕ:13/12/2024.**

1) Providing water proofing, repairs to existing old Division office building (PDMC Office) in KUWS & D Board Office premises, Dharwad. Under office rent obtained from PDMC.
2) Providing Detailed Survey for water supply works of sy no. 495/5, 495/6 & 505/2 of Kundagol Ashraya Colony of Kundagol Taluk

ಹೆಚ್ಚಿನ ವಿವರಗಳಿಗಾಗಿ ಕಾರ್ಯಪಾಲಕ ಅಭಿಯಂತರು, ಕನನೀಸ ಮತ್ತು ಒಚಮಂಡಳಿ, ಧಾರವಾಡ ಕಚೇರಿಯನ್ನು ಸಂಪರ್ಕಿಸಬಹುದು.

ಸಹಿ/- ಕಾರ್ಯಪಾಲಕ ಅಭಿಯಂತರು,
ಕನನೀಸ ಮತ್ತು ಒಚಮಂಡಳಿ ವಿಭಾಗ, ಧಾರವಾಡ

ವಾ.ಸಾ.ಇ./ಧಾ/789/2024-25/ದೇಶಪಾಂಡೆಪಬ್ಲಿಸಿಟಿ


# ಮನಸ್ಸಿನ ನಿಯಂತ್ರಣಕ್ಕೆ ಧ್ಯಾನ ಅವಶ್ಯ

■ **ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಧ್ಯಾನವನ್ನು ಇಂದು ಉತ್ತಮ ಆರೋಗ್ಯಕ್ಕಾಗಿ, ಮನಸ್ಸಿನ ನಿಯಂತ್ರಣಕ್ಕಾಗಿ ಮಾಡುತ್ತಿದ್ದು, ಧ್ಯಾನವು ವ್ಯಕ್ತಿಯನ್ನು ಸ್ವಯಂ ಶಿಸ್ತಿನ ಕಡೆಗೆ ಕರೆದುಕೊಂಡು ಹೋಗುತ್ತದೆ. ದಿನದ ಒಂದಿಷ್ಟು ಸಮಯ ನಾವು ಧ್ಯಾನ ಮಾಡುವುದರಿಂದ ಏಕಾಗ್ರತೆ ಹೆಚ್ಚಾಗುವುದು ಮತ್ತು ಒತ್ತಡದಿಂದ ಮುಕ್ತಿ ಸಿಗುವುದು ಎಂದು ಸಾಹಿತಿ ಹಾಗೂ ಶಿಕ್ಷಕಿ ಡಾ. ಜಯಶ್ರೀ ಕೋಲಕಾರ ಹೇಳಿದರು.

ಅವರು ಸೋಮವಾರ ಪಟ್ಟಣದ ಬಿಸಿಎನ್ ವಿದ್ಯಾಸಂಸ್ಥೆ ಆವರಣದಲ್ಲಿ ಪತಂಜಲಿ ಯೋಗ ಸಮಿತಿ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ವಿಶ್ವ ಧ್ಯಾನ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ಧ್ಯಾನದಿಂದ ಮಾನಸಿಕ ಸ್ಥಿರತೆ ಮತ್ತು ಸಮತೋಲನವನ್ನು ಸಹ ಸಾಧಿಸಬಹುದಾಗಿದೆ. ಧ್ಯಾನದ ಮಹತ್ವ ಮತ್ತು ಪ್ರಯೋಜನವನ್ನು ಅರಿತು ಕೊಳ್ಳುವ ಮೊದಲು ನಾವು ಧ್ಯಾನ ಎಂದರೇನು ಎಂಬುದನ್ನು ತಿಳಿದುಕೊಂಡಿರಬೇಕು ಎಂದು ಹೇಳಿದರು.

ಯೋಗ ಶಿಕ್ಷಕಿ ಕಾವ್ಯಾ ವಡಕಣ್ಣವರ ಮಾತನಾಡಿ, ಮಾನಸಿಕ ಮತ್ತು ದೈಹಿಕ ಸ್ಥಿರತೆಯನ್ನು ಕೂಡ ನಾವು ಧ್ಯಾನವೆಂದು ಕರೆಯಬಹುದಾಗಿದ್ದು, ಧ್ಯಾನದಿಂದ ಮನುಷ್ಯನಲ್ಲಿನ ಏಕಾಗ್ರತೆ ಜಾಗೃತವಾಗುತ್ತದೆ. ಧ್ಯಾನ ಎಂದರೆ ಮುಕ್ತಿ. ನಮ್ಮ ದೇಹದ ಮೇಲಿನ ನಿಯಂತ್ರಣಕ್ಕೆ ಧ್ಯಾನ ಅತ್ಯಂತ ಉಪಯುಕ್ತವಾಗಿದೆ. ನಮ್ಮ ಮನಸ್ಸನ್ನು ನಿಯಂತ್ರಣದಲ್ಲಿಟ್ಟು ಧ್ಯಾನ ಮಗ್ನರಾದಾಗ ಉತ್ತಮ ಫಲಿತಾಂಶ ಪಡೆಯಲು ಸಾಧ್ಯ. ಯೋಗ ಮತ್ತು ಧ್ಯಾನವನ್ನು ಸರಿಯಾಗಿ ಅಳವಡಿಸಿಕೊಂಡಲ್ಲಿ ಉತ್ತಮ ಆರೋಗ್ಯ ಪಡೆಯಬಹುದಾಗಿದೆ ಎಂದು ಹೇಳಿದರು.



ಕಾರ್ಯಕ್ರಮದ ಅಧ್ಯಕ್ಷತೆ ಯನ್ನು ಪ್ರಕಾಶ ವಡಕಣ್ಣವರ ವಹಿಸಿದ್ದರು. ಡಾ. ಬೆಳವಗಿ, ಉಮೇಶ ಮ್ಯಾಗೇರಿ, ಮೈತ್ರಾದೇವಿ ಹಿರೇಮಠ, ವೀಣಾ ಹತ್ತಿಕಾಳ, ಶಿವಲೀಲಾ ಚೆಕ್ಕಿ, ನಂದಿನಿ ಮಾಳವಾಡ, ಅಕ್ಕಮ್ಮ ಕಳಸದ, ಮಧು ಗಾಂಧಿ, ಶ್ರೀಮತಿ ಮಲ್ಲಮ್ಮ, ಗೀತಾ ಹುಲಜಾರ ಮುಂತಾದವರಿದ್ದರು.


ಕರ್ನಾಟಕ ಸರ್ಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಆದರಹಳ್ಳಿ ತಾಲೂಕ ॥ ಲಕ್ಷ್ಮೇಶ್ವರ, ಜಿಲ್ಲಾ ॥ ಗದಗ**

e-mail : adarahalli.shi.gdg@gmail.com

ನಂ: ಗ್ರಾ.ಪಂ./ಆದರಹಳ್ಳಿ/ಟೆಂಡರ/2024-25/ ದಿನಾಂಕ : 24-12-2024

**ದರಪಟ್ಟಿ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತಿಗೆದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 02 ಕಾಮಗಾರಿಗಳ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, **https://kppp.karnataka.gov.in** ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

1) INDENT NO : RDPR/2024-25/IND5922/CALL-2 & 5923/CALL-2

ಟೆಂಡರಿಗಿಟ್ಟ ಕನಿಷ್ಠ ಮೊತ್ತ ರೂ. : Rs : **5.09** Lakhs

ಟೆಂಡರ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ, ಇ.ಎಂ.ಡಿ. ಸಂಬಂಧಪಟ್ಟ ವರ್ಕ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬ್‌ಸೈಟಿನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ : **24-12-2024** ರಿಂದ **04-01-2025** ರಂದು 16.00 ಗಂಟೆಯವರೆಗೆ. ಟೆಂಡರ ತೆರೆಯುವ ದಿನಾಂಕ : **05-01-2025** ರಂದು 16.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ/- ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು
ಗ್ರಾಮ ಪಂಚಾಯತ ಆದರಹಳ್ಳಿ
ತಾಲೂಕ : ಲಕ್ಷ್ಮೇಶ್ವರ ಜಿಲ್ಲಾ : ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/484/2024-25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka